O.S. No.39/2022 -PW-1

ದಿನಾಂಕ 20-06-2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀ. ವಾಯ್ ಎನ್ ಎ ವಕೀಲರಿಂದ.

ಈ ದಾವೆಯಲ್ಲಿ ನಾನು ವಾದಿಯ ಜಿ ಪಿ ಎ ಹೋಲ್ಡರ್ ಆಗಿದ್ದು, ವಾದಿಯ ಪರ ಪ್ರಕರಣ ನಡೆಸುತ್ತಿದ್ದು, ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈ ದಿನ ಮಾನ್ಯ ನ್ಯಾಯಾಲಯಕ್ಕೆ ದಿನಾಂಕ 19-06-2023 ರ ಜಿ ಪಿ ಎ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಸಿ ಟಿ ಎಸ್ ನಂಬರ 2773 ರ Property Registered Card ನ ಹಾಗೂ ಅದಕ್ಕೆ ಸಂಬಂಧಿಸಿದ ನಕಾಶೆಯನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ 2 ಎಂದು, ಸಿ ಟಿ ಎಸ್ ನಂಬರ 2773 ಕ್ಕೆ ಸಂಬಂಧಿಸಿದ ಆಸ್ತಿ ತೆರಿಗೆ ರಜಿಸ್ಟರ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು, ದಿನಾಂಕ 29-05-1986 ರ ಜವಾಬ ಬೇಸ್ಮಿಯ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂದು, ದಿನಾಂಕ 29-05-1986 ರ ನೊಟೀಸಿನ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು, ದಿನಾಂಕ 29-05-1986 ರಂದು ಪ್ರತಿವಾದಿ ಹಳಿಯಾಳದ ಸಿಟಿ ಸರ್ವೇ ಕಚೇರಿಗೆ ಸಲ್ಲಿಸಿದ ಅರ್ಜಿಯ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 6 ಎಂದು, ಒಂದು ಕಂದಾಯ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 7 ಎಂದು, ದಿನಾಂಕ 27-07-2012 ರಂದು ಹಳಿಯಾಳ ಪಟ್ಟಣ ಪಂಚಾಯತ ರವರು ನನ್ನ ತಂದೆಗೆ ಕಳುಹಿಸಿದ ಅರ್ಜಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 8 ಎಂದು, ಎರಡು ಭಾವಚಿತ್ರ ಹಾಗೂ ಅದಕ್ಕೆ ಸಂಬಂಧಿಸಿದ ಒಂದು ಸಿಡಿಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 9 ರಿಂದ 11 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

O.S. No.39/2022 -PW-1

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.